# Akashvani : Bangalore
# Regional Bulletin In Kannada
# 25.03.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 25.03.2026 / 18.40 hrs

***************

**ಮುಖ್ಯಾಂಶಗಳು**

1. ಸ್ಥಳೀಯ ಸಂಸ್ಥೆಯ ಚುನಾವಣೆಗಳಲ್ಲಿ ಮತಪತ್ರ ಬಳಕೆ : ಪರಿಷತ್‌ನಲ್ಲೂ ಧ್ವನಿಮತದ ಅಂಗೀಕಾರ
2. ಯುವನಿಧಿ ನೋಂದಾಯಿತರ ಮಾಸಾಶನ ನಿಲ್ಲಿಸಿಲ್ಲ ; ಕಂತಿನ ರೂಪದಲ್ಲಿ ಹಣ ಬಿಡುಗಡೆ ; ಸರ್ಕಾರ ಸ್ಪಷ್ಟನೆ
3. ರಾಜ್ಯದ ಸಾಲದ ಮೊತ್ತ 8 ಲಕ್ಷದ 24 ಸಾವಿರ ಕೋಟಿ ರೂಪಾಯಿ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಹಿತಿ
4. ಬಜೆಟ್ ಮಂಡನೆಗೆ ಹಣಕಾಸಿನ ಕೊರತೆಯಿರುವ ಪಾಲಿಕೆಗಳಿಗೆ ನೆರವು ನೀಡಲು ರಾಜ್ಯ ಸರ್ಕಾರ ನಿರ್ಧಾರ
5. ರಾಜ್ಯದ ಹಲವೆಡೆ ಮುಂದಿನ 5 ದಿನಗಳ ಕಾಲ ಮಳೆ ; ಹವಾಮಾನ ಇಲಾಖೆ ಮುನ್ನೆಚ್ಚರಿಕೆ

***************

ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ವಿದ್ಯುನ್ಮಾನ ಮತಯಂತ್ರದ ಬದಲಿಗೆ ಬ್ಯಾಲೆಟ್ ಪೇಪರ್ ಬಳಕೆಗೆ ಅವಕಾಶ ಕಲ್ಪಿಸುವ 2026ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ವಿಧೇಯಕವನ್ನು ಪ್ರತಿಪಕ್ಷಗಳ ಸಭಾತ್ಯಾಗದ ನಡುವೆ ವಿಧಾನಪರಿಷತ್‌ನಲ್ಲಿ ಇಂದು ಅಂಗೀಕರಿಸಲಾಗಿದೆ.

ಗ್ರಾಮ ಪಂಚಾಯಿತಿ, ತಾಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿ ಚುನಾವಣೆಗಳಲ್ಲಿ ವಿದ್ಯುನಾನ ಮತಯಂತ್ರಗಳ ಬದಲಿಗೆ ಬ್ಯಾಲೆಟ್ ಪೇಪರ್ ಬಳಕೆ ಈ ಮಸೂದೆಯ ಉದ್ದೇಶವಾಗಿದೆ. ಈ ಮಸೂದೆಯು ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಸಾರ್ವಜನಿಕ ವಿಶ್ವಾಸವನ್ನು ಮರುಸ್ಥಾಪಿಸುವ ಗುರಿ ಹೊಂದಿದೆ. ಈ ಮೂಲಕ ವಿಧಾನಮಂಡಲದ ಉಭಯ ಸದನಗಳಲ್ಲಿ ಈ ಮಸೂದೆಗೆ ಒಪ್ಪಿಗೆ ದೊರೆತಿದೆ.

ವಿಧೇಯಕದ ಪರ್ಯಾಲೋಚನ ಪ್ರಸ್ತಾವ ಮಂಡಿಸಿ ಮಾತನಾಡಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಮತಪತ್ರದ ಗೌಪ್ಯತೆ, ಮತದಾರರ ದಬ್ಬಾಳಿಕೆ, ಬೆದರಿಕೆ ಮತ್ತು ಅನಗತ್ಯ ಪ್ರಭಾವದಿಂದ ರಕ್ಷಿಸುವ ಮೂಲಕ ಪ್ರಜಾಪ್ರಭುತ್ವ ಪ್ರಕ್ರಿಯೆಯ ಪಾವಿತ್ರ್ಯವನ್ನು ಸುರಕ್ಷಿತಗೊಳಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

ಇವಿಎಂ ಮೇಲೆ ಜನರ ವಿಶ್ವಾಸಾರ್ಹತೆ ಕಡಿಮೆಯಾಗುತ್ತಿದ್ದು, ರಾಜಕೀಯ ಪಕ್ಷಗಳು, ತಜ್ಞರು ಮತ್ತು ಸ್ವಯಂ ಸೇವಾ ಸಂಸ್ಥೆಗಳು ಚುನಾವಣಾ ಆಯೋಗವನ್ನು ಪ್ರಶ್ನಿಸುತ್ತಿವೆ. ಆದರೆ ಚುನಾವಣಾ ಆಯೋಗ ಯಾವುದೇ ಉತ್ತರ ನೀಡುತ್ತಿಲ್ಲ. ಅಲ್ಲದೇ ಅನೇಕ ರಾಜ್ಯಗಳು ಬ್ಯಾಲೆಟ್ ಪೇಪರ್ ನಲ್ಲಿ ಚುನಾವಣೆ ನಡೆಸಿವೆ ಎಂದು ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದಾರೆ.

***************

ರಾಜ್ಯದಲ್ಲಿ ಯುವನಿಧಿ ಯೋಜನೆಯಡಿ ನೋಂದಣಿ ಮಾಡಿಕೊಂಡ ಪದವೀಧರರಿಗೆ ಮಾಶಾಸನ ನಿಲ್ಲಿಸಿಲ್ಲ. ನೋಂದಣಿ ಮಾಡಿಕೊಂಡ ಎಲ್ಲರಿಗೂ ಕಂತಿನ ರೂಪದಲ್ಲಿ ಹಣ ಬಿಡುಗಡೆ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ವಿಧಾನಸಭೆಯಲ್ಲಿ ಆಯವ್ಯಯದ ಮೇಲೆ ನಡೆದ ಚರ್ಚೆಗೆ ಉತ್ತರ ನೀಡಿದ ಅವರು, ಈ ಬಾರಿಯೂ 600 ಕೋಟಿ ರೂಪಾಯಿ ಅನುದಾನವನ್ನು ನಿಗದಿ ಮಾಡಲಾಗಿದೆ. ಮಾಸಿಕವಾಗಿ ನೀಡುವ ಕಂತುಗಳನ್ನು ಮುಂದುವರಿಸಲಾಗುವುದು ಎಂದರು. ವಿರೋಧ ಪಕ್ಷದ ಉಪ ನಾಯಕ ಅರವಿಂದ ಬೆಲ್ಲದ್, ಸರ್ಕಾರ ನಿಗದಿ ಮಾಡಿರುವ ಅನುದಾಧ ಸಾಲುವುದಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

***************

ರಾಜ್ಯದ ಜಿಎಸ್‌ಟಿ ಸಂಗ್ರಹವು 2023–24ರಲ್ಲಿ 30 ಸಾವಿರದ 871 ಕೋಟಿ ರೂಪಾಯಿ ಮತ್ತು 2024–25ರಲ್ಲಿ 40 ಸಾವಿರದ 368 ಕೋಟಿ ರೂಪಾಯಿ ಕಡಿಮೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯವು 15ನೇ ಹಣಕಾಸು ಆಯೋಗದ ಅಡಿಯಲ್ಲಿ ಕಡಿಮೆಯಾದ ತೆರಿಗೆ ಪಾಲಿನ ಕಾರಣದಲ್ಲಿ 39 ಸಾವಿರದ 500 ಕೋಟಿ ರೂಪಾಯಿ ನಷ್ಟ ಅನುಭವಿಸಿದೆ. ಪರಿಣಾಮವಾಗಿ 2023–24 ರಿಂದ ರಾಜ್ಯ ಆದಾಯದ ಕೊರತೆ ಎದುರಿಸುತ್ತಿದೆ ಎಂದು ಸದನಕ್ಕೆ ತಿಳಿಸಿದ್ದಾರೆ.

ಯಾವುದೇ ರಾಜ್ಯ ಅಥವಾ ದೇಶವಾಗಲಿ ಸಾಲ ಮಾಡದಿರಲು ಸಾಧ್ಯವಿಲ್ಲ. ಸಮಾಜ ಕಲ್ಯಾಣ ಹಾಗೂ ಅಭಿವೃದ್ಧಿಗಾಗಿ ಸಾಲ ಮಾಡಬೇಕು. ರಾಜ್ಯ ಸರ್ಕಾರ ನಿಯಮದ ಮಿತಿಯೊಳಗೆ ಸಾಲ ಮಾಡಿದ್ದು, ರಾಜ್ಯದ ಸಾಲದ ಮೊತ್ತ 8 ಲಕ್ಷದ 24 ಸಾವಿರ ಕೋಟಿ ರೂಪಾಯಿಗಳಷ್ಟಿದೆ ಎಂದು ಹೇಳಿದ್ದಾರೆ.

***************

ಬಜೆಟ್ ಮಂಡನೆಗೆ ಹಣಕಾಸಿನ ಕೊರತೆಯಿರುವ ಪಾಲಿಕೆಗಳಿಗೆ ರಾಜ್ಯ ಸರ್ಕಾರ ನೆರವು ನೀಡಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ಐದೂ ಪಾಲಿಕೆಗಳು ಪ್ರತ್ಯೇಕ ಬಜೆಟ್ ಮಂಡಿಸಲಿದ್ದು, ಉತ್ತಮ ಯೋಜನೆ ರೂಪಿಸಲಾಗಿದೆ. ಈ ಬಗ್ಗೆ ಶಾಸಕರ ಜೊತೆಗೂ ಚರ್ಚೆ ಮಾಡಲಾಗಿದೆ.

ವಿಕೇಂದ್ರಿಕರಣದಿಂದಾಗಿ ಆಯಾ ಪಾಲಿಕೆಗಳ ಅನುದಾನ ಬೇರೆಡೆಗೆ ವರ್ಗಾವಣೆಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

***************

ಭಾರತ ಸರ್ಕಾರದ ಬೆಂಗಳೂರು ವಾರ್ತಾ ಶಾಖೆ  ಹಾಗೂ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತಾಶ್ರಯದಲ್ಲಿ ರಾಯಚೂರು ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಇಂದು ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ವಾರ್ತಾಲಾಪ ಕಾರ್ಯಾಗಾರ ನಡೆಯಿತು.

ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕ ಎಸ್.ಜಿ.ರವೀಂದ್ರ ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳ ಪ್ರಚುರಪಡಿಸಲು ಪತ್ರಕರ್ತರು ಹೆಚ್ಚಿನ ಒತ್ತು ಕೊಡಬೇಕು ಎಂದು ಮನವಿ ಮಾಡಿದರು.

ಬಡವರು, ಮಹಿಳೆಯರು, ಯುವಕರು, ರೈತರು ಸೇರಿದಂತೆ ಎಲ್ಲಾ ವರ್ಗದ ಜನರಿಗೆ ಪ್ರಧಾನಿ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದ್ದು, ಈ ಯೋಜನೆಗಳನ್ನು ಜನರಿಗೆ ತಲುಪಿಸುವ ಕಾರ್ಯ ಆಗಬೇಕಿದೆ ಎಂದು ಹೇಳಿದರು.

ಇದೇ ವೇಳೆ ಮಾತನಾಡಿದ ರಾಯಚೂರು ಜಿಲ್ಲಾಧಿಕಾರಿ ನಿತೀಶ್ ಕೆ. ಪತ್ರಕರ್ತರಿಗೆ ತಿಳುವಳಿಕೆಯ ಕಾರ್ಯಕ್ಷಮತೆ, ಕಾರ್ಯದಕ್ಷತೆ ಹೆಚ್ಚಿಸುವ ದಿಶೆಯಲ್ಲಿ ಕಾರ್ಯಕ್ರಮಗಳನ್ನು, ಕಾರ್ಯಾಗಾರಗಳನ್ನು ರೂಪಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

***************

ರಾಜ್ಯದಲ್ಲಿ ಮುಂದಿನ ಐದು ದಿನಗಳ ಕಾಲ ಪೂರ್ವ ಮುಂಗಾರು ಮಳೆ ತೀವ್ರಗೊಳ್ಳಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಕೆಲವೆಡೆ ಗಾಳಿಯ ಸಮೇತ ಹಾಗೂ ಆಲಿಕಲ್ಲು ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ. ರಾಜ್ಯದ ದಕ್ಷಿಣ ಒಳನಾಡು, ಉತ್ತರ ಒಳನಾಡು ಮತ್ತು ಮಲೆನಾಡು ಭಾಗಗಳಲ್ಲಿ ಗುಡುಗು ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ.

ವಿಶೇಷವಾಗಿ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಆಲಿಕಲ್ಲು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರು ನಗರದಲ್ಲಿ ಸಂಜೆಯ ವೇಳೆಗೆ ಕೆಲವೆಡೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

***************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದಿನೇ ದಿನೇ ಉಷ್ಣಾಂಶ ಏರಿಕೆಯಾಗುತ್ತಿದ್ದು, ಜನತೆ ಅಗತ್ಯ ಮುಂಜಾಗೃತಾ ಕ್ರಮ ತೆಗೆದುಕೊಳ್ಳಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ ತಿಳಿಸಿದ್ದಾರೆ.

ಬಿಸಿಲ ಬೇಗೆ ಹೆಚ್ಚು ಇರುವುದರಿಂದ ಜನತೆ ಸಡಿಲವಾದ ಉಡುಪುಗಳಿಗೆ ಆದ್ಯತೆ ನೀಡಬೇಕು. ಸಾಕಷ್ಟು ನೀರು ಕುಡಿಯುವುದು, ಬಿಸಿಲಿನಿಂದ ಆದಷ್ಟು ದೂರ ಇರಲು ಪ್ರಯತ್ನಿಸಬೇಕು. ಮನೆಯಲ್ಲಿಯೇ ಪಾನೀಯಗಳನ್ನು ತಯಾರಿಸಿ ಕುಡಿಯುವುದು ಆರೋಗ್ಯದ ದೃಷ್ಟಿಯಿಂದ ಉತ್ತಮ ಎಂದು ಅವರು ಸಲಹೆ ನೀಡಿದ್ದಾರೆ.

***************

ಯಾದಗಿರಿ ಜಿಲ್ಲೆಯಲ್ಲಿನ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ಯಾವುದೇ ಕೊರತೆ ಇಲ್ಲ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸ್ಪಷ್ಟಪಡಿಸಿದ್ದಾರೆ.

ಗ್ಯಾಸ್ ಏಜೆನ್ಸಿಗಳು, ಕಂಪನಿಗಳ ಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಅವರು, ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗದಂತೆ ಏಜೆನ್ಸಿಗಳು ಮನೆ ಮನೆಗೆ ಸಿಲಿಂಡರ್ ವಿತರಣೆ ಮಾಡಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

ಗ್ರಾಹಕರು ಬುಕ್ಕಿಂಗ್ ಮಾಡಿದ ಬಳಿಕ ಸಿಲಿಂಡರ್‌ಗಳನ್ನು ನೇರವಾಗಿ ಮನೆಗೆ ತಲುಪಿಸುವ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ತಿಳಿಸಿದ್ದಾರೆ.

ಹೆಚ್ಚುವರಿ ಹಣ ಪಡೆದು ಸಿಲಿಂಡರ್ ಮಾರಾಟ ಮಾಡಿದರೆ ಗಂಭೀರವಾಗಿ ಪರಿಗಣಿಸಲಾಗುವುದು. ಅಂತಹ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿ, ಸಂಬಂಧಿತ ಏಜೆನ್ಸಿಗಳ ಪರವಾನಗಿ ರದ್ದುಪಡಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

***************

ಮಂಡ್ಯದಲ್ಲಿ ರೈತರು ಬೆಳೆಯುವ ಬೆಳೆಗಳನ್ನು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕವೇ ಖರೀದಿಸಿ ಮಾರಾಟ ಮಾಡಿ, ರೈತರನ್ನು ಆರ್ಥಿಕವಾಗಿ ಸದೃಢಗೊಳಿಸುವ ಹೊಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ.

ಪಾಂಡವಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಹಕಾರಿ ಸಂಘಗಳ ಮೂಲಕ ಇಷ್ಟು ದಿನಗಳ ಕಾಲ ರೈತರಿಗೆ ಬೇಕಾದ ರಸಗೊಬ್ಬರ, ಬ್ಯಾಂಕ್ ಸಾಲ–ಸೌಲಭ್ಯ ಹಾಗೂ ಪಡಿತರ ವಿತರಣೆಯನ್ನು ಮಾತ್ರ ಮಾಡಲಾಗುತ್ತಿತ್ತು. ಇನ್ನು ಮುಂದೆ ರೈತರು ಬೆಳೆಯುವ ಭತ್ತ, ರಾಗಿ, ಜೋಳ, ಕಾಳುಗಳನ್ನು ನೇರವಾಗಿ ರೈತರಿಂದ ಖರೀದಿಸಲಾಗುವುದು. ಜೊತೆಗೆ ಸಹಕಾರಿ ಸಂಘಗಳ ಮೂಲಕವೇ ಸಿದ್ದ ಪಡಿಸಿದ ಬೆಳೆಗಳನ್ನು ಮಾರಾಟ ಮಾಡಲು ಕ್ರಮವಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

***************

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಜಯನಗರ ವಲಯ ವ್ಯಾಪ್ತಿಯ 42 ಅತಿ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವ ಆಸ್ತಿಗಳ ಹರಾಜು ಪ್ರಕ್ರಿಯೆ ನಾಳೆ ನಡೆಯಲಿದೆ ಎಂದು ಪಾಲಿಕೆ ಆಯುಕ್ತ ಕೆ.ಎನ್.ರಮೇಶ್ ತಿಳಿಸಿದ್ದಾರೆ.

ಸಾಕಷ್ಟು ಅವಕಾಶಗಳನ್ನು ನೀಡಿದ ಬಳಿಕವೂ ಗುರುತಿಸಲಾಗಿರುವ ಆಸ್ತಿ, ತೆರಿಗೆಯನ್ನು ಪಾವತಿಸದ 42 ಅತೀ ಹೆಚ್ಚು ಬಾಕಿ ಉಳಿಸಿಕೊಂಡಿರುವ ಹೆಚ್ಚುವರಿ ಬಾಕಿದಾರರ ಆಸ್ತಿಗಳನ್ನು ಜಿ.ಬಿ.ಎ ಕಾಯ್ದೆ ಹಾಗೂ ನಿಯಮಗಳನ್ವಯ ಹರಾಜು ಪ್ರಕ್ರಿಯೆಗೆ ಒಳಪಡಿಸಲು ತೀರ್ಮಾನಿಸಲಾಗಿದೆ.

ಹರಾಜು ಪ್ರಕ್ರಿಯೆಗೂ ಮುನ್ನ ಪಟ್ಟಿಯಲ್ಲಿನ ಸ್ವತ್ತಿಗೆ ಸಂಪೂರ್ಣ ಆಸ್ತಿ ತೆರಿಗೆ ಪಾವತಿಸಿದಲ್ಲಿ ಅಂತಹ ಆಸ್ತಿಗಳನ್ನು ಹರಾಜು ಪ್ರಕ್ರಿಯೆಯಿಂದ ಕೈಬಿಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಬಳ್ಳಾರಿಯಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಂಯುಕ್ತಾಶ್ರಯದಲ್ಲಿ 'ಸುರಕ್ಷಿತ ಉತ್ಪನ್ನಗಳು ಆತ್ಮ ವಿಶ್ವಾಸದ ಗ್ರಾಹಕರು' ಎಂಬ ಘೋಷವಾಕ್ಯದಡಿ ವಿಶ್ವ ಗ್ರಾಹಕರ ಹಕ್ಕುಗಳ ದಿನಾಚರಣೆ ಕಾರ್ಯಕ್ರಮ ನಡೆಯಿತು

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ರಾಜೇಶ್ ಹೊಸಮನೆ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗ್ರಾಹಕರು ತಾವು ನೀಡಿದ ಮೊತ್ತಕ್ಕೆ ಅರ್ಹ ಸೇವೆ ಹಾಗೂ ವಸ್ತು ಪಡೆಯುವ ಹಕ್ಕಿದೆ ಎಂದು ತಿಳಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎನ್.ತಿಪ್ಪೆಸ್ವಾಮಿ ಮಾತನಾಡಿ ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷದಲ್ಲಿ 296 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ ಎಂದು ಹೇಳಿದರು.

***************

**ಸಂಕ್ಷಿಪ್ತ ಸುದ್ದಿಗಳು**

1. ಗ್ರಾಹಕರು ಆಹಾರ, ಚಿನ್ನ ಸೇರಿದಂತೆ ಇತರ ವಸ್ತುಗಳನ್ನು ಖರೀದಿಸುವಾಗ ವಸ್ತುವಿನ ಮೇಲೆ ಐಎಸ್ಐ ಹಾಲ್ ಮಾರ್ಕ್ ನಂತಹ ಚಿಹ್ನೆಗಳನ್ನು ನೋಡಿ ಖರೀದಿಸಬೇಕು ಎಂದು ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಎ. ಕೆ ನವೀನ ಕುಮಾರಿ **ಮೈಸೂರಿನಲ್ಲಿಂದು** ತಿಳಿಸಿದ್ದಾರೆ.
2. **ಕೋಲಾರದಲ್ಲಿ** ಸರ್ಕಾರದ ಸೌಲಭ್ಯಗಳು ಪ್ರತಿಯೊಬ್ಬರಿಗೂ ಸಿಗಬೇಕೆಂಬ ಉದ್ದೇಶದಿಂದ ಹೋಬಳಿ ಮಟ್ಟದಲ್ಲಿ ಪಿಂಚಣಿ ಅದಾಲತ್ ನಡೆಸಲಾಗುತ್ತಿದೆ. ಫಲಾನುಭವಿಗಳು ಇದರ ಸದ್ಬಳಕೆ ಮಾಡಿಕೊಳ್ಳಬೇಕು ತಹಸಿಲ್ದಾರ್ ಗಾಯತ್ರಿ ಹೇಳಿದ್ದಾರೆ.
3. ಕೈಗಾರಿಕೆ ಘಟಕಗಳ ಸ್ಥಾಪನೆಯೊಂದಿಗೆ ಸ್ಥಳೀಯ ಜನರಿಗೆ ಉದ್ಯೋಗ ಅವಕಾಶ ಕಲ್ಪಿಸಲು ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಿ, ಆಸಕ್ತ ಉದ್ಯಮಿಗಳಿಗೆ ಹಂಚಿಕೆ ಮಾಡಲಾಗಿದೆ. ನಿಗದಿತ ಕಾಲಾವಧಿಯ ಒಳಗೆ ಯೋಜನೆಗಳನ್ನು ಪೂರ್ಣಗೊಳಿಸದಿದ್ದರೆ ನವ ಉದ್ಯಮಿಗಳಿಗೆ ಹಂಚಿಕೆ ಮಾಡುವಂತೆ ಅಧಿಕಾರಿಗಳಿಗೆ **ಹಾಸನ ಜಿಲ್ಲಾಧಿಕಾರಿ** ಸ್ವರೂಪ ಟಿ.ಕೆ ಸೂಚನೆ ನೀಡಿದ್ದಾರೆ.

*******ಮುಕ್ತಾಯ********